# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 884

ಸದಸ್ಯರ ಹೆಸರು : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ

ಉತ್ತರಿಸಬೇಕಾದ ಸಚಿವರು : ಸಾರಿಗೆ ಸಚಿವರು

ಉತ್ತರಿಸಬೇಕಾದ ದಿನಾಂಕ : 18-12-2018

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಸರ್ಕಾರ ಸ್ವಾಮಿತ್ವದ ಮೂರು ಸಾರಿಗೆ ನಿಗಮಗಳು ಜನರ ಪ್ರಯಾಣಕ್ಕಾಗಿ ಸಾಕಷ್ಟು ವ್ಯವಸ್ಥೆ ಮಾಡಿದ್ದರೂ ರಜೆ ಹಾಗೂ ಹಬ್ಬ-ಹರಿ ದಿನಗಳಲ್ಲಿ ಜನರ ಬೇಡಿಕೆಗೆ ತಕ್ಕಂತೆ ಸಾರಿಗೆ ಅನುಕೂಲತೆ ದೊರಕದಿರುವುದರಿಂದ ಖಾಸಗಿ ಬಸ್ ಮಾಲೀಕರು ಇಂತಹ ಸಂದರ್ಭಗಳಲ್ಲಿ ಪ್ರಯಾಣಿಕರಿಂದ ಸುಲಿಗೆ ಮಾಡುತ್ತಿದ್ದು, ಇದನ್ನು ನಿಯಂತ್ರಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ; | ಖಾಸಗಿ ಒಪ್ಪಂದ ವಾಹನಗಳ ಪ್ರವರ್ತಕರು ಹೆಚ್ಚಿನ ಬೇಡಿಕೆ ಸೃಷ್ಟಿಯಾಗುವ ಪರಿಸ್ಥಿತಿಯ ಲಾಭವನ್ನು ಪಡೆಯಲು ಪ್ರಯಾಣಿಕರಿಗೆ ಹೆಚ್ಚಿನ ಪ್ರಮಾಣದಲ್ಲಿ ಪ್ರಯಾಣ ದರವನ್ನು ವಿಧಿಸುವುದು, ವಿಶೇಷವಾಗಿ ಇಂತಹ ಖಾಸಗಿ ಒಪ್ಪಂದ ವಾಹನಗಳ ಅನಧಿಕೃತ ಕಾರ್ಯಾಚರಣೆಯನ್ನು ನಿರ್ಬಂಧಿಸುವ ದಿಸೆಯಲ್ಲಿ ರಾಜ್ಯದಾದ್ಯಂತ ಒಪ್ಪಂದ ವಾಹನಗಳ ತನಿಖೆಯ ಕಾರ್ಯವನ್ನು ಪ್ರಯಾಣಿಕರಿಗೆ ಯಾವುದೇ ತೊಂದರೆ ಉಂಟಾಗದಂತೆ ಕೈಗೊಂಡು, ಮೋಟಾರು ವಾಹನಗಳ ಕಾಯ್ದೆ, ನಿಯಮಗಳು ಹಾಗೂ ರಹದಾರಿ ಷರತ್ತುಗಳನ್ನು ಉಲ್ಲಂಘಿಸಿ ಕಾರ್ಯಾಚರಣೆ ಮಾಡುತ್ತಿದ್ದ ಒಪ್ಪಂದ ವಾಹನಗಳ ವಿರುದ್ಧ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ.<br><br>ಒಪ್ಪಂದ ವಾಹನ ಮತ್ತು ಅಖಿಲ ಭಾರತ ಪ್ರವಾಸಿ ವಾಹನಗಳ ತಪಾಸಣೆ ಮಾಡಿ ತನಿಖಾ ವರದಿಗಳನ್ನು ನೀಡಿರುವ ವಾಹನಗಳ ರಹದಾರಿಗಳ ಮೇಲೆ ಇಲಾಖೆಯಿಂದ ಕಾನೂನು ರೀತ್ಯ ರಹದಾರಿಗಳನ್ನು ಅಮಾನತ್ತುಗೊಳಿಸುವ, ರಾಜೀದಂಡ ವಿಧಿಸುವಂತಹ ಕ್ರಮವನ್ನು ಕಾಲಕಾಲಕ್ಕೆ ತೆಗೆದುಕೊಳ್ಳಲಾಗುತ್ತಿದೆ ಹಾಗೂ ತನಿಖಾ ಕಾರ್ಯವು ನಿರಂತರವಾಗಿ ಚಾಲ್ತಿಯಲ್ಲಿರುತ್ತದೆ. |
| ಆ) | ರಾಜ್ಯದ ಸಾರಿಗೆ ಸಂಸ್ಥೆಯಿಂದ ವಿವಿಧ ಜಿಲ್ಲಾ ಕೇಂದ್ರ ಸ್ಥಾನಗಳಿಗೆ ಹಲವಾರು ಬಸ್ಸುಗಳು ಸಂಚರಿಸಲಾಗುತ್ತಿದ್ದರೂ ಹಬ್ಬ-ಹರಿ ದಿನಗಳು ಹಾಗೂ ರಜೆಯ ಸಮಯದಲ್ಲಿ ಸಾರ್ವಜನಿಕರು ಬೆಂಗಳೂರಿನಿಂದ ಹೊರ ಜಿಲ್ಲೆಗಳಿಗೆ ಹೋಗಲು ಹಾಗೂ ಜಿಲ್ಲೆಗಳಿಂದ ಬೆಂಗಳೂರಿಗೆ ಬರಲು ಸರಿಯಾದ ವ್ಯವಸ್ಥೆ ಇಲ್ಲದೆ ಸಾರ್ವಜನಿಕರು ಸಮಸ್ಯೆ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು |
| ಇ) | ಇಂತಹ ಸಂದರ್ಭದಲ್ಲಿ ಖಾಸಗಿ ಬಸ್ ಮಾಲೀಕರು ಒಂದಕ್ಕೆ ದುಪ್ಪಟ್ಟು ದರವನ್ನು ವಿಧಿಸಿ ಸಾರ್ವಜನಿಕರನ್ನು ಶೋಷಣೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು |

--2

| | | |
|---|---|---|
| ಈ) | ಈ ತಾರತಮ್ಯ ಹಾಗೂ ಸಾರ್ವಜನಿಕರ ನಿರಂತರ ಶೋಷಣೆಯನ್ನು ನಿಲ್ಲಿಸಲು ಸರ್ಕಾರ ಏನು ಕ್ರಮ ಕೈಗೊಳ್ಳಲಿದೆ? | ಸಾರಿಗೆ ಸಂಸ್ಥೆಗಳಿಂದ ವಾರಾಂತ್ಯ ದಿನಗಳಲ್ಲಿ, ಸರ್ಕಾರಿ ರಜೆ ಹಾಗೂ ಹಬ್ಬ-ಹರಿದಿನಗಳ ಸಮಯದಲ್ಲಿ ಸಾರ್ವಜನಿಕ ಪ್ರಯಾಣಿಕರ ಬೇಡಿಕೆಗನುಗುಣವಾಗಿ ಬೆಂಗಳೂರಿನಿಂದ ರಾಜ್ಯದ ವಿವಿಧ ಸ್ಥಳಗಳು, ತಾಲ್ಲೂಕು ಹಾಗೂ ಜಿಲ್ಲಾ ಕೇಂದ್ರಗಳಿಗೆ ಮತ್ತು ತಾಲ್ಲೂಕು ಹಾಗೂ ಜಿಲ್ಲಾ ಕೇಂದ್ರಗಳಿಂದ ಇತರೆ ತಾಲ್ಲೂಕು ಹಾಗೂ ಜಿಲ್ಲಾ ಕೇಂದ್ರಗಳಿಗೆ ಮತ್ತು ವಿವಿಧ ಸ್ಥಳಗಳಿಂದ ಬೆಂಗಳೂರಿಗೆ ವಿಶೇಷ/ಹೆಚ್ಚುವರಿ ಸಾರಿಗೆ ಸೌಲಭ್ಯ ಕಲ್ಪಿಸಲಾಗುತ್ತಿದೆ.<br>ಒಪ್ಪಂದ ವಾಹನ ಮತ್ತು ಅಖಿಲ ಭಾರತ ಪ್ರವಾಸಿ ವಾಹನಗಳ ತಪಾಸಣೆ ಮಾಡಿ ತನಿಖಾ ವರದಿಗಳನ್ನು ಆಧರಿಸಿ ವಾಹನಗಳ ರಹದಾರಿಗಳ ಮೇಲೆ ಇಲಾಖೆಯಿಂದ ಕಾನೂನು ರೀತ್ಯ ರಹದಾರಿಗಳನ್ನು ಅಮಾನತ್ತುಗೊಳಿಸುವ, ರಾಜೀದಂಡ ವಿಧಿಸುವಂತಹ ಕ್ರಮವನ್ನು ಕಾಲಕಾಲಕ್ಕೆ ತೆಗೆದುಕೊಳ್ಳಲಾಗುತ್ತಿದೆ ಹಾಗೂ ತನಿಖಾ ಕಾರ್ಯವು ನಿರಂತರವಾಗಿ ಚಾಲ್ತಿಯಲ್ಲಿರುತ್ತದೆ.<br>ರಹದಾರಿ ನಿಯಮಗಳನ್ನು ಉಲ್ಲಂಘಿಸಿ ಸಂಚರಿಸುತ್ತಿರುವ ವಾಹನಗಳನ್ನು ತನಿಖೆಗೆ ಒಳಪಡಿಸುವ ಪ್ರವರ್ತನ ಕಾರ್ಯವು ನಿರಂತರವಾಗಿ ಜಾರಿಯಲ್ಲಿದೆ. ಒಪ್ಪಂದ ವಾಹನ ಮತ್ತು ಅಖಿಲ ಭಾರತ ಪ್ರವಾಸಿ ವಾಹನಗಳ ತಪಾಸಣೆ ಮಾಡಿ ನೀಡಿರುವ ತನಿಖಾ ವರದಿಗಳನ್ವಯ ಕಾನೂನು ರೀತ್ಯ ರಹದಾರಿಗಳನ್ನು ಅಮಾನತ್ತುಗೊಳಿಸಲು ಮತ್ತು ರಾಜೀದಂಡಗಳನ್ನು ವಿಧಿಸಲು ಕ್ರಮ ವಹಿಸಲಾಗುತ್ತಿದೆ. |

ಸಾರಿಇ 65 ಸಾಇಪ್ರ 2018

(ಡಿ.ಸಿ.ತಮ್ಮಣ್ಣ)
ಸಾರಿಗೆ ಸಚಿವರು